ಸಾಕ್ಷಿಯನ್ನು ದಿಃ 16-07-2026 ರಂದು ಪುನಃ ಕರೆಯಿಸಿ ಸತ್ಯ ಪ್ರತಿಜ್ಞೆ ಮಾಡಲಾಯಿತು.

**ಪಾಟೀ ಸವಾಲುಃ ಶ್ರೀ ಎಲ್ ಬಿ ಹೆಚ್ ವಕೀಲರಿಂದ (2 ನೇ ಎದುರುದಾರರ ಪರ)**

ಅಪಘಾತ ಅಣ್ಣೀಗೇರಿ ಕ್ರಾಸ ಹತ್ತಿರ ಆಗಿದ್ದು, ಆ ದಿನ ನಾನು ನನ್ನ ಮಗನೊಂದಿಗೆ ಅಣ್ಣಿಗೇರಿ ಬಸ್ಸ ಸ್ಟ್ಯಾಂಡ್ ಕಡೆಗೆ ಹೊರಟಿದ್ದೆ. ಅಪಘಾತದ ದಿನಾಂಕ ನೆನಪಿಲ್ಲ. ಅಪಘಾತಪಡಿಸಿದ ಲಾರಿ ಸಂಖ್ಯೆ ಹೇಳಲು ಬರುವುದಿಲ್ಲ. ಲಾರಿ ಸಂಖ್ಯೆ ಕೆ ಎ 27 ಬಿ 8163 ಚಾಲಕನ ತಪ್ಪಿನಿಂದ ಯಾವುದೇ ಅಪಘಾತ ಆಗಿಲ್ಲ ಎಂದರೆ ಸರಿಯಲ್ಲ. ಆ ದಿನ ಹೆಲ್ಮೇಟ್ ಧರಿಸದ ತಪ್ಪಿಗೆ ಮತ್ತು ಮೋಟಾರ್ ಸೈಕಲ್ ನಲ್ಲಿ ಮೂರು ಜನ ಸವಾರಿ ಮಾಡಿದ ತಪ್ಪಿಗೆ ನನ್ನ ಮಗನ ವಿರುದ್ಧ ಚಾರ್ಜಶೀಟ್ ಸಲ್ಲಿಸಲಾಗಿದೆ ಎಂದರೆ ಸರಿಯಲ್ಲ. ನನ್ನ ಮಗನ ತಪ್ಪಿನಿಂದ ಅಪಘಾತ ಆಗಿದೆ ಎಂದರೆ ಸರಿಯಲ್ಲ. ನನಗೆ ಆದ ಗಾಯಕ್ಕೂ ಲಾರಿ ಸಂಖ್ಯೆ ಕೆ ಎ 27 ಬಿ 8163 ವಾಹನಕ್ಕೂ ಯಾವುದೇ ಸಂಬಂಧ ಇಲ್ಲ ಎಂದರೆ ಸರಿಯಲ್ಲ.

ಅಪಘಾತದಲ್ಲಿ ನನ್ನ ಎಡಗೈ ಕತ್ತರಿಸಿ ಹೋಗಿದೆ, ಬೆನ್ನು ಹಾಗೂ ದೇಹದ ಎಲ್ಲಾ ಕಡೆ ತೀವ್ರ ಸ್ವರೂಪದ ಗಾಯಗಳಾಗಿವೆ. ನನಗೆ ಮಧುಮೇಹ ಇತ್ತು ಎಂದರೆ ಸರಿ. ನನ್ನ ಎಡಗೈ ಮೂಳೆಗೆ ಪೆಟ್ಟಾಗಿತ್ತು, ನನಗೆ ಮಧುಮೇಹ ಇದ್ದ ಕಾರಣ ನಂಜಾಗಿ ಕೈ ಕತ್ತರಿಸಬೇಕಾಯಿತು ಆದರೆ ಅಪಘಾತಕ್ಕೂ ನನ್ನ ಕೈ ಕತ್ತರಿಸಿದ್ದಕ್ಕೂ ಸಂಬಂಧ ಇಲ್ಲ ಎಂದರೆ ಸರಿಯಲ್ಲ. ನಾನು ಸಂಪೂರ್ಣ ಗುಣಮುಖಳಾಗಿದ್ದು ಮೊದಲಿನಂತೆ ಕೆಲಸ ಮಾಡುತ್ತಿದ್ದೇನೆ ಎಂದರೆ ಸರಿಯಲ್ಲ. ಸರ್ಕಾರಿ ಸೌಲಭ್ಯ ಪಡೆಯಲು ಬೇಕಾಗಿದೆ ಎಂದು ವೈದ್ಯರಿಗೆ ಹೇಳಿ ಸುಳ್ಳು ಅಂಗನ್ಯೂನತಾ ಪ್ರಮಾಣ ಪತ್ರ ಹಾಜರಪಡಿಸಿದ್ದೇನೆ ಎಂದರೆ ಸರಿಯಲ್ಲ. ಶಾಶ್ವತ ಅಂಗನ್ಯೂನತೆ ಎಂದು ಅಂಗನ್ಯೂನತಾ ಪ್ರಮಾಣ ಪತ್ರದಲ್ಲಿ ಬರೆದಿಲ್ಲ ಎಂದರೆ ಸರಿಯಲ್ಲ. ಎಸ್ ಡಿ ಎಮ್ ಆಸ್ಪತ್ರೆಯಲ್ಲಿ ಒಳರೋಗಿಯಾಗಿ ಚಿಕಿತ್ಸೆ ಪಡೆದಿದ್ದೇನೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ರೂ. 6,00,000/- ವೈದ್ಯಕೀಯ ವೆಚ್ಚ ಭರಿಸಿದ್ದೇನೆಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಸುಳ್ಳು ಮೆಡಿಕಲ್ ಬಿಲ್ಲ ಹಾಜರಪಡಿಸಿದ್ದೇನೆ ಎಂದರೆ ಸರಿಯಲ್ಲ. ನನಗೆ ಈಗ 60 ವರ್ಷಕ್ಕಿಂತ ವಯಸ್ಸಾಗಿದೆ

ಎಂದರೆ ಸರಿಯಲ್ಲ. ನನಗೆ ತಿಂಗಳಿಗೆ ರೂ.25,000/- ಆದಾಯ ಇತ್ತು ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಲಾರಿ ಚಾಲಕನ ತಪ್ಪಿನಿಂದ ಯಾವುದೇ ಅಪಘಾತ ಆಗಿರದೇ ಇದ್ದರೂ ಸಹ ಪರಿಹಾರ ಪಡೆಯುವ ಉದ್ದೇಶದಿಂದ ಪೊಲೀಸರೊಂದಿಗೆ ಶಾಮೀಲಾಗಿ ಲಾರಿ ಹಾಗೂ ಚಾಲಕನ ವಿರುದ್ಧ ಸುಳ್ಳು ಪ್ರಕರಣ ದಾಖಲಿಸಿದ್ದೇವೆ ಎಂದರೆ ಸರಿಯಲ್ಲ. ನನಗೆ ಪರಿಹಾರ ನೀಡಲು ವಿಮಾ ಸಂಸ್ಥೆಯವರು ಬಾಧ್ಯಸ್ಥರಲ್ಲ ಎಂದರೆ ಸರಿಯಲ್ಲ. ಸುಳ್ಳು ಅರ್ಜಿ ಸಲ್ಲಿಸಿ, ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

(1 ನೇ ಎದುರುದಾರ ಏಕತರ್ಫಿ ಇರುವುದರಿಂದ ಅವರ ಪರವಾಗಿ ಪಾಟೀ ಸವಾಲು ಇಲ್ಲ ಎಂದು ಪರಿಗಣಿಸಿದೆ)

ಮರು ವಿಚಾರಣೆಃ ಇಲ್ಲ

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯು ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)

ಓ ಹೇ ಕೇ ಸರಿ ಇದೆ.

ಪ್ರಧಾನ ಹಿರಿಯ ದಿವಾಣಿ ನ್ಯಾಯಾಧೀಶರು,
ಗದಗ.